## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20 ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖಾ ಗಣಕೀಕರಣ ಲೆಕ್ಕಶೀರ್ಷಿಕೆ 2515-00-101-0-24-059 ಯೋಜನೆಯಡಿ ಒದಗಿಸಲಾಗಿರುವ ಅನುದಾನದಲ್ಲಿ ಮುಂದುವರೆದ ಕಾರ್ಯಕ್ರಮಗಳಿಗೆ ನಿಗದಿಪಡಿಸಿದ ₹ 1155.00 ಲಕ್ಷಗಳ ಅನುದಾನದ ಕ್ರಿಯಾಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ) ಇವರ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ/22/ವೆಚ್ಚ-6/2019, ದಿನಾಂಕ:02.04.2019

2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/154/ಎಫ್‌ಎನ್/2018, ಬೆಂಗಳೂರು, ದಿನಾಂಕ:10.04.2019.

*****

**ಪ್ರಸ್ತಾವನೆ:**

ಓದಲಾದ (2) ಸರ್ಕಾರದ ಆದೇಶದಲ್ಲಿ ಯೋಜನೆ ಮತ್ತು ಯೋಜನೇತರ ಕಾರ್ಯಕ್ರಮಗಳನ್ನು 2019-20 ನೇ ಸಾಲಿಗೆ ಮುಂದುವರಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ 2019-20 ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಗಣಕೀಕರಣ ಲೆಕ್ಕ ಶೀರ್ಷಿಕೆ:2515-00-101-0-24-059 ಯೋಜನೆಯಡಿಯಲ್ಲಿ ₹ 2100.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿರುತ್ತದೆ.

ಸದರಿ ಯೋಜನೆಯಡಿಯಲ್ಲಿ ಒದಗಿಸಲಾಗಿರುವ ₹2100.00 ಲಕ್ಷ ಅನುದಾನದಲ್ಲಿ ಮುಂದುವರೆದ ಕಾರ್ಯಕ್ರಮಗಳಿಗೆ ಹಾಗೂ ಹೊಸ ಯೋಜನೆಗಳಿಗೆ ಅನುದಾನವು ಸೇರ್ಪಡೆಗೊಳಿಸಲಾಗಿದೆ ಎಂದು ಓದಲಾದ (1) ರಲ್ಲಿ ತಿಳಿಸಲಾಗಿದೆ. ಅದರಂತೆ, 2019-20 ನೇ ಸಾಲಿಗೆ ಹಂಚಿಕೆಯಾದ ₹ 2100.00 ಲಕ್ಷ ಅನುದಾನದಲ್ಲಿ ಮುಂದುವರೆದ ಕಾರ್ಯಕ್ರಮಕ್ಕೆ ₹ 1155.00 ಲಕ್ಷ ಅನುದಾನ ಮತ್ತು ಹೊಸ ಯೋಜನೆಗಾಗಿ ₹ 945.00 ಲಕ್ಷ ಅನುದಾನವನ್ನು ನಿಗದಿಪಡಿಸಲಾಗಿದೆ.

ಪ್ರಸ್ತುತ ₹ 945.00 ಲಕ್ಷ ಅನುದಾನವನ್ನು ಹೊರತುಪಡಿಸಿ 2019-20 ನೇ ಸಾಲಿಗೆ ಮುಂದುವರೆದ ಕಾರ್ಯಕ್ರಮಕ್ಕೆ ನಿಗದಿಪಡಿಸಿದ ₹ 1155.00 ಲಕ್ಷ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಈ ಕೆಳಗಿನಂತೆ ತಯಾರಿಸಲಾಗಿದೆ. ಹೊಸ ಕಾರ್ಯಕ್ರಮಕ್ಕೆ ಪ್ರತ್ಯೇಕವಾಗಿ ಕ್ರಿಯಾಯೋಜನೆಯನ್ನು ತಯಾರಿಸಿ ಅನುಮೋದನೆ ಪಡೆಯಲಾಗುವುದು.

ಸದರಿ ಯೋಜನೆಯಲ್ಲಿ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರವನ್ನು ಮುಖ್ಯ ಸಂಪಾದಕರು, (ಕರ್ನಾಟಕ ವಿಕಾಸ) ಇವರಿಗೆ ಹಾಗೂ ಮೇಲುರುಜು ಮಾಡುವ ಅಧಿಕಾರವನ್ನು ಪ್ರಧಾನ ಸಂಪಾದಕರು, (ಕರ್ನಾಟಕ ವಿಕಾಸ) ರವರಿಗೆ ವಹಿಸಲಾಗಿದೆ. 2019-20 ನೇ ಸಾಲಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಗಣಕೀಕರಣ ಲೆಕ್ಕ ಶೀರ್ಷಿಕೆ: 2515-00-101-0-24-059 ಯೋಜನೆಯಡಿಯಲ್ಲಿ ಒದಗಿಸಲಾಗಿರುವ ₹ 2100.00 ಲಕ್ಷಗಳ ಅನುದಾನದಲ್ಲಿ ಪ್ರಸ್ತುತ ₹ 1155.00 ಲಕ್ಷ ಅನುದಾನಕ್ಕೆ ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇವರ ಅನುಮೋದನೆಯಂತೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿಯಂತೆ ಈ ಕೆಳಕಂಡಂತೆ ತಯಾರಿಸಿದ ಕ್ರಿಯಾಯೋಜನೆಗೆ ಅನುಮೋದನೆ ನೀಡಬೇಕಾಗಿರುವುದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/43/ಗ.ಕೋಶ/2019, ಬೆಂಗಳೂರು, ದಿನಾಂಕ:18.05.2019

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ 2019-20 ನೇ ಸಾಲಿನ ಆಯವ್ಯಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಗಣಕೀಕರಣ ಲೆಕ್ಕಶೀರ್ಷಿಕೆ:2515-00-101-0-24-059 ಯೋಜನೆಯಡಿಯಲ್ಲಿ ಒದಗಿಸಲಾಗಿರುವ ₹ 2100.00 ಲಕ್ಷ ಅನುದಾನದಲ್ಲಿ ಈ ಕೆಳಕಂಡ ಮುಂದುವರೆದ ಕಾರ್ಯಕ್ರಮಗಳಿಗೆ ನಿಗದಿಪಡಿಸಿದ ₹ 1155.00 ಲಕ್ಷಗಳ ಅನುದಾನದ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದೆ.

| ಕ್ರ.ಸಂ | ವಿವರ | ನಿಗದಿಪಡಿಸಿದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 1 | ಗ್ರಾಅಪ ಇಲಾಖೆಯ ತಂತ್ರಾಂಶಗಳಾದ ಪಂಚತಂತ್ರ, ಇ-ಸ್ವತ್ತು, ಗಾಂಧಿ ಸಾಕ್ಷಿ ಕಾಯಕ ಮತ್ತು ಇತರ ತಂತ್ರಾಂಶಗಳ ಉನ್ನತೀಕರಣ, ಅಭಿವೃದ್ಧಿ ಮತ್ತು ನಿರ್ವಹಣೆಗೆ ಮತ್ತು ಎಸ್.ಎಂ.ಎಸ್ ಬಗ್ಗೆ NIC ಗೆ ಪಾವತಿ. ಇ-ಆಡಳಿತ ಶಾಖೆಗೆ ಮತ್ತು ಇತರ ಶಾಖೆಗೆ ಅಗತ್ಯವಿರುವ ತಾಂತ್ರಿಕ ಮತ್ತು ತಾಂತ್ರಿಕೇತರ ಹೊರಗುತ್ತಿಗೆ ಸಿಬ್ಬಂದಿಗಳ ಆಡಳಿತಾತ್ಮಕ ವೆಚ್ಚ ಮತ್ತು ಇತರ ವೆಚ್ಚದ ಬಗ್ಗೆ. | ₹ 199.75 |
| 2 | 2018 ರ ಬಜೆಟ್ ಘೋಷಣೆಯಂತೆ 2018-19 ನೇ ಸಾಲಿಗೆ ರಾಜ್ಯದ 2000 ಗ್ರಾಮ ಪಂಚಾಯತ್‌ಗಳಲ್ಲಿ ದಾಖಲೆ ಮತ್ತು ದಾಖಲಾತಿಗಳನ್ನು ಗಣಕೀಕರಣಗೊಳಿಸಲು ಕ್ರಮವಹಿಸಲಾಗಿದೆ.<br>2019-20 ನೇ ಸಾಲಿನಲ್ಲಿ ಸದರಿ ಕಾರ್ಯಕ್ರಮವನ್ನು ಮುಂದುವರೆಸುವುದಕ್ಕಾಗಿ ರಾಜ್ಯದ 3821 ಗ್ರಾಮ ಪಂಚಾಯತ್‌ಗಳಲ್ಲಿ ದಾಖಲೆ ಮತ್ತು ದಾಖಲಾತಿಗಳನ್ನು ಗಣಕೀಕರಣಗೊಳಿಸುವ ಬಗ್ಗೆ. (ಪ್ರತಿ ಗ್ರಾಮ ಪಂಚಾಯತ್‌ಗೆ ₹ 25,000 ಗಳಂತೆ) | ₹ 955.25 |
| | ಒಟ್ಟು | ₹ 1155.00 |

ಸದರಿ ಯೋಜನೆಯಲ್ಲಿ ಹಣ ಸೆಳೆಯುವ ಹಾಗೂ ಬಟವಾಡೆ ಮಾಡುವ ಅಧಿಕಾರವನ್ನು ಸಂಪಾದಕರು, (ಕರ್ನಾಟಕ ವಿಕಾಸ) ಹಾಗೂ ಮೇಲು ರುಜು ಮಾಡುವ ಅಧಿಕಾರವನ್ನು ಪ್ರಧಾನ ಸಂಪಾದಕರು(ಕರ್ನಾಟಕ ವಿಕಾಸ) ಇವರು ನಿರ್ವಹಿಸಲು ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಂ:ಆಇ/1/ಟಿಎಪಿ/96, ದಿನಾಂಕ:10-07-1996ರಲ್ಲಿ ಇಲಾಖೆ ಕಾರ್ಯದರ್ಶಿಯವರಿಗೆ ಪ್ರದತ್ತವಾದ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಎಂ. ಜುಲ್ಫಿಖಾರ್‌ಉಲ್ಲಾ)
ನಿರ್ದೇಶಕರು(ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಯವರಿಗೆ, ಗ್ರಾಅಪ ಇಲಾಖೆ, ಬೆಂಗಳೂರು.
2. ಮಹಾಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು, ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ, ಗ್ರಾಅಪ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಯೋಜನಾ ಮಾಹಿತಿ ಮೇಲ್ವಿಚಾರಣಾ ವಿಭಾಗ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪಕಾರ್ಯದರ್ಶಿ(ಆಡಳಿತ-1) ಹಾಗೂ ರಾಜ್ಯ ನೋಡಲ್ ಅಧಿಕಾರಿ, ಖಜಾನೆ-2 ಕೋಶ, ಗ್ರಾಅಪ ಇಲಾಖೆ.
9. ಪ್ರಧಾನ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪ, ಬೆಂಗಳೂರು.
10. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಗ್ರಾಅಪ, ಬೆಂಗಳೂರು.

d:\jg_2019\go_2019\2019-20_final.docx